NEW PRIVATE MEDICAL COLLEGE COMING UP IN KARNATAKA

1 Subbaiah Institute of Medical Sciences,
Subbaiah Hospital Complex,
Jail Road, Shimoga-577201.

1310(689) ಶ್ರೀ ಕ್ಯಾತಸಂದ್ರ, ಎನ್. ರಾಜಣ್ಣ (ಬೆಳ್ಳಾವಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತುಮಕೂರು ಜಿಲ್ಲೆಯಲ್ಲಿ ಚಿಕುಂಗುನ್ಯ ವ್ಯಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಚಿಕೂನ್ ಗುನ್ಯಾ ಕಾಯಿಲೆ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸರ್ಕಾರವು ಈ ರೋಗದ ನಿಯಂತ್ರಣಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

1) ಜ್ವರ ಪ್ರಕರಣಗಳು ತೀವ್ರವಾಗಿ ವರದಿಯಾದ ಪ್ರದೇಶಗಳಲ್ಲಿ ಸ್ಥಳೀಯವಾಗಿ ಚಿಕಿತ್ಸಾಲಗಳನ್ನು ತೆರೆದು ವೈದ್ಯರುಗಳನ್ನು ನಿಯೋಜಿಸಿ ದಿನದ 24 ಗಂಟೆಯೂ ತ್ವರಿತ ಚಿಕಿತ್ಸೆ ಸಿಗುವಂತೆ ವ್ಯವಸ್ಥೆ ಮಾಡಲಾಗಿದೆ. ತುರ್ತು ಸಂದರ್ಭಗಳಲ್ಲಿ ರೋಗಿಗಳನ್ನು ದೊಡ್ಡ ಆಸ್ಪತ್ರೆಗಳಿಗೆ ಸಾಗಿಸಲು ಅನುಕೂಲವಾಗುವಂತೆ ಆಂಬುಲೆನ್ಸ್ ವಾಹನ ಸೌಕರ್ಯವನ್ನು ಒದಗಿಸುವ ವ್ಯವಸ್ಥೆ ಮಾಡಲಾಗಿದೆ.

2) ಜನರು ಆತಂಕಕ್ಕೆ ಒಳಗಾಗದಂತೆ ಸೂಕ್ತ ಆರೋಗ್ಯ ಶಿಕ್ಷಣದ ಮೂಲಕ ಅವರು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಎಲ್ಲಾ ರೀತಿಯ ಮಾಹಿತಿ ನೀಡಿ ಇವುಗಳನ್ನು ತಪ್ಪದೇ ಪಾಲಿಸುವಂತೆ ಅವರ ಮನವೊಲಿಸಿ ಸ್ಥಳೀಯ ಮುಖಂಡರು ಹಾಗೂ ಸ್ವಯಂ ಸೇವಾ ಸಂಸ್ಥೆಗಳು, ಸಮಾಜ ಸೇವಕರುಗಳನ್ನೊಳಗೊಂಡ ಸಮುದಾಯದ ಸಕ್ರಿಯ ಭಾಗ ವಹಿಸುವಿಕೆಗಾಗಿ ಆರೋಗ್ಯ ಶಿಕ್ಷಣ ಚಟುವಟಿಕೆಗಳನ್ನು ಚುರುಕುಗೊಳಿಸಿದೆ.

3) ಸ್ವಯಂ ರಕ್ಷಣಾ ವಿಧಾನಗಳ ಅನುಸರಣೆ, ಪರಿಸರ ನೈರ್ಮಲ್ಯ, ನೀರು ಶೇಖರಣಾ ವಿಧಾನಗಳಲ್ಲಿ ಸೂಕ್ತ ಮಾರ್ಪಾಡುಗಳು, ಕುಡಿಯುವ ನೀರಿನ ಸೂಕ್ತ

ನಿರ್ವಹಣೆ ಇವೇ ಮೊದಲಾದ ಕ್ರಮಗಳನ್ನು ಕೈಗೊಳ್ಳಲು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.

4) ಗ್ರಾಮಪಂಚಾಯತಿ/ತಾಲ್ಲೂಕು ಪಂಚಾಯತಿ ಹಾಗೂ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳನ್ನು ಸಂಪರ್ಕಿಸಿ ಇಲಾಖೆಯು ಕೈಗೊಂಡ ಕ್ರಮಗಳು ಸದಸ್ಯರು ಕೈಗೊಳ್ಳಬೇಕಾದ ಚಟುವಟಿಕೆಗಳ ಬಗ್ಗೆ ಸೂಕ್ತ ಮಾಹಿತಿ ನೀಡಿ ರೋಗ ತಡೆಗಟ್ಟಲು ಹಾಗೂ ನಿಯಂತ್ರಿಸಲು ಅವರ ಸಂಪೂರ್ಣ ಸಹಕಾರ ಪಡೆಯುವಂತೆ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗೆ ಸೂಚನೆಗಳನ್ನು ನೀಡಲಾಗಿದೆ.

5) ಜ್ವರದ ಉಲ್ಬಣತೆಗೆ ಕಾರಣವನ್ನು ಪತ್ತೆ ಮಾಡಲು ಜಿಲ್ಲಾ ಪ್ರಯೋಗ ಶಾಲಾ ತಂತ್ರಜ್ಞರು ಜಿಲ್ಲಾ ಕೀಟ ಶಾಸ್ತ್ರಜ್ಞರು ಮತ್ತು ಎಲ್ಲಾ ಸರ್ವೇಕ್ಷಣಾ ಅಧಿಕಾರಿಗಳ ತಂಡವನ್ನು ರಚಿಸಿದ್ದು ತ್ವರಿತವಾಗಿ ಸ್ಥಳ ಸಮೀಕ್ಷೆಗಾಗಿ ನಿಯೋಜಿಸಿ ತುರ್ತಾಗಿ ರೋಗವಾಹಕಗಳ ಸೂಕ್ತ ನಿಯಂತ್ರಣಾ ಕ್ರಮಗಳನ್ನು ಕೈಗೊಳ್ಳುವುದೇ ಅಲ್ಲದೇ ಕೀಟನಾಶಕ ಧೂಮೀಕರಣ, ಕೀಟನಾಶಕ ಸಿಂಪಡಣಡ, ಲಾರ್ವಾಹಾರಿ ಮೀನುಗಳ ಬಿಡುಗಡೆ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

6) ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಇತರ ಇಲಾಖಾ ಅಧಿಕಾರಿಗಳ ಸಮನ್ವಯ ಸಮಿತಿಯನ್ನು ಕ್ರಮವಾಗಿ ಜಿಲ್ಲಾಧಿಕಾರಿಗಳ ಹಾಗೂ ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ರಚಿಸಿ ಸಭೆಗಳನ್ನು ಕರೆದು ಪರಿಸ್ಥಿತಿಯ ಪರಿವೀಕ್ಷಣೆ, ಅಧ್ಯಯನ ಹಾಗೂ ಕಾರ್ಯತಂತ್ರ ರೂಪುರೇಷೆಗಳನ್ನು ಯೋಚಿಸಿ ಅನುಷ್ಠಾನಗೊಳಿಸಲಾಗುತ್ತಿದೆ.

7) ರೋಗದ ಮುನ್ನೆಚರಿಕೆ ಕ್ರಮಗಳ ಬಗ್ಗೆ ಅರಿವು ಮೂಡಿಸಲು ಪ್ರತಿದಿನ ಆಕಾಶವಾಣಿಯಲ್ಲಿ ಪ್ರಚಾರ ಮಾಡುತ್ತಿದ್ದು ದಿನಪತ್ರಿಕೆಗಳಲ್ಲಿ ಜಾಹೀರಾತು ಮತ್ತು ಭಿತ್ತಿಪತ್ರ/ಕರಪತ್ರಗಳ ಮೂಲಕ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

1311(690) ಶ್ರೀ ಕ್ಯಾತ್ಸಂದ್ರ ಎನ್. ರಾಜಣ್ಣ (ಬೆಳ್ಳಾವಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ವೈದ್ಯರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ
ಮಂಜೂರಾಗಿರುವ ಮಹಿಳಾ ವೈದ್ಯರ ಹುದ್ದೆಗಳು – 352